# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಮಹಾದೇವಪ್ಪ ತಂದೆ ಅಂಬಾರಾಯ ಸಿರಗಾಪೂರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಜಿಲ್ಲಾ ಪಂಚಾಯತ್ ಸೇವೆಗೆ ಸೇರಿದ ಅಧಿಕಾರಿ) ಮಾನ್ವಿ, ರಾಯಚೂರು ಜಿಲ್ಲೆ ಇವರ ವಿರುದ್ಧ ದಾಖಲಾಗಿರುವ ದಾಳಿ ಪ್ರಕರಣ - ಸೇವೆಯಿಂದ ಅಮಾನತ್ತುಪಡಿಸುವ ಬಗ್ಗೆ - ಆದೇಶ.

**ಓದಲಾಗಿದೆ:-** ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ ಲೋಕ್/ಐಎನ್‌ವಿ(ಜಿ)/ಜಿ-36/ಸಿಆರ್-12/2015 ಕಲಬುರಗಿ ದಿನಾಂಕ 23-11-2015.

*****

**ಪ್ರಸ್ತಾವನೆ:**

ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮೇಲೆ ಓದಲಾದ ದಿನಾಂಕ 23-11-2015ರ ಪತ್ರದ ಜೊತೆ ಪೂರ್ವಭಾವಿ ತನಿಖಾ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರಕ್ಕೆ ಸಲ್ಲಿಸಿ, ಶ್ರೀ ಮಹಾದೇವಪ್ಪ ತಂದೆ ಅಂಬಾರಾಯ ಸಿರಗಾಪೂರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಮಾನ್ವಿ, ರಾಯಚೂರು ಜಿಲ್ಲೆ ಇವರು ತಮ್ಮ ಎಲ್ಲಾ ಬಲ್ಲ ಮೂಲಗಳ ಆದಾಯಕ್ಕಿಂತ ಹೆಚ್ಚಿನ ಸಂಪತ್ತು ಹೊಂದಿರುತ್ತಾರೆಂಬ ಬಗ್ಗೆ ನಂಬಲರ್ಹ ಮಾಹಿತಿಯ ಆಧಾರದ ಮೇರೆಗೆ ಇವರ ವಿರುದ್ಧ ಗುಲ್ಬರ್ಗಾ ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ 12/2015ಅನ್ನು ಭ್ರಷ್ಟಾಚಾರ ನಿರೋಧ ಕಾಯ್ದೆ 1988ರ ಕಲಂ 13(1)(ಇ) ಸಹವಾಚನ 13(2)ರ ರೀತ್ಯಾ ದಿನಾಂಕ 2-11-2015ರಂದು ದಾಖಲಿಸಿಕೊಂಡು ದಿನಾಂಕ 3-11-2015 ರಂದು ಶ್ರೀ ಮಹಾದೇವಪ್ಪ ತಂದೆ ಅಂಬಾರಾಯ ಸಿರಗಾಪೂರ ಇವರು ಮತ್ತು ಕುಟುಂಬದವರು ವಾಸವಾಗಿರುವ ಮನೆ, ಪತ್ನಿಯ ಹೆಸರಿನಲ್ಲಿರುವ ಫಾರಂ ಹೌಸ್, ಆಪಾದಿತ ಅಧಿಕಾರಿಯ ಪಾಲಕರು ವಾಸಿಸುತ್ತಿದ್ದ ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಶಿರಗಾಪುರ ಗ್ರಾಮದ ಮನೆ ಹಾಗೂ ಆಪಾದಿತ ಅಧಿಕಾರಿಯ ಕಚೇರಿಯ ಮೇಲೆ ಪಂಚ ಸಾಕ್ಷಿಗಳ ಸಮಕ್ಷಮ ಶೋಧನೆ ನಡೆಸಿದ್ದು, ಶೋಧನಾ ಸಂದರ್ಭದಲ್ಲಿ ಕಂಡುಬಂದಿರುವ ಚರ ಮತ್ತು ಸ್ಥಿರಾಸ್ತಿಗಳ ವಿವರಗಳನ್ನು ಸರ್ಕಾರಕ್ಕೆ ಸಲ್ಲಿಸಿ, ಆಪಾದಿತರು ತಮ್ಮ ಬಲ್ಲ ಮೂಲಗಳಿಗಿಂತ ಹೆಚ್ಚಿನ ಆದಾಯ ಹೊಂದಿರುವುದು ಪ್ರಾಥಮಿಕ ತನಿಖೆಯಲ್ಲಿ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಸದರಿಯವರನ್ನು ಕೂಡಲೇ ಅಮಾನತ್ತಿನಲ್ಲಿಡುವಂತೆ ಹಾಗೂ ಸದರಿಯವರ ಲೀನ್ (ಸ್ಥಾನ) ವನ್ನು ಬೇರೆ ಕಡೆಗೆ ವರ್ಗಾಯಿಸುವಂತೆ ಕೋರಿರುತ್ತಾರೆ.

ಸರ್ಕಾರವು ಕರ್ನಾಟಕ ಲೋಕಾಯುಕ್ತ ಕಚೇರಿಯ ಅಪರ ಪೊಲೀಸ್ ಮಹಾ ನಿರ್ದೇಶಕರ ಪತ್ರ ಹಾಗೂ ಅದಕ್ಕೆ ಲಗತ್ತಿಸಿ ಕಳುಹಿಸಿದ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಮಹಾದೇವಪ್ಪ ತಂದೆ ಅಂಬಾರಾಯ ಸಿರಗಾಪೂರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಪರಿಶೀಲನಾ ಅವಧಿಯಲ್ಲಿ ಅರ್ಜಿಸಿರುವ ಆದಾಯ ಹಾಗೂ ಚರ ಮತ್ತು ಸ್ಥಿರಾಸ್ತಿಯ ಒಟ್ಟು ಮೌಲ್ಯ ಮತ್ತು ಈ ಅವಧಿಯಲ್ಲಿ

---2

ಮಾಡಿರುವ ವೆಚ್ಚ ಇತ್ಯಾದಿ ವಿವರಗಳು ಈ ಕೆಳಕಂಡಂತಿರುತ್ತವೆ:-

| ಕ್ರ.ಸಂ. | ವಿವರಗಳು | ಮೌಲ್ಯ ರೂ.ಗಳಲ್ಲಿ |
|---|---|---|
| 1. | ಪರಿಶೀಲನಾ ಅವಧಿಯಲ್ಲಿನ ಆದಾಯ | ರೂ. 86,03,150-00 |
| 2. | ಪರಿಶೀಲನಾ ಅವಧಿಯಲ್ಲಿ ಅರ್ಜಿಸಿರುವ ಆಸ್ತಿ ಮೊತ್ತ | ರೂ. 2,53,75,906-00 |
| 3. | ಖರ್ಚು ಮೊತ್ತ | ರೂ. 67,43,283-00 |
| 4. | ಬಲ್ಲ ಮೂಲಗಳಿಗಿಂತ ಹೆಚ್ಚುವರಿಯಾಗಿ ಅರ್ಜಿಸಿರುವ ಆಸ್ತಿಯ ಮೊತ್ತ. | **ರೂ. 2,35,16,039-00** |

ಕರ್ನಾಟಕ ಲೋಕಾಯುಕ್ತ ಕಚೇರಿಯು ಸರ್ಕಾರಕ್ಕೆ ಒದಗಿಸಿರುವ ಪ್ರಾಥಮಿಕ ವರದಿಯನುಸಾರ ಶ್ರೀ ಮಹಾದೇವಪ್ಪ ತಂದೆ ಅಂಬಾರಾಯ ಸಿರಗಾಪೂರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮಾನ್ವಿ ಇವರು ತಮ್ಮ ಬಲ್ಲ ಮೂಲಗಳಿಗಿಂತ ಹೆಚ್ಚಿನ ಚರ ಮತ್ತು ಸ್ಥಿರಾಸ್ತಿಗಳನ್ನು ಹೊಂದಿರುವುದು ಪ್ರಾಥಮಿಕ ತನಿಖೆಯಲ್ಲಿ ಸ್ಪಷ್ಟವಾಗಿ ಕಂಡು ಬಂದಿರುವುದರಿಂದ ಸದರಿಯವರು ತನಿಖಾ ಸಂದರ್ಭದಲ್ಲಿ ಹಸ್ತಕ್ಷೇಪ ಮಾಡುವ ಹಾಗೂ ಸಾಕ್ಷಿ ಪುರಾವೆಗಳನ್ನು ನಾಶಪಡಿಸುವ ಸಾಧ್ಯತೆ ಇರುವುದರಿಂದ ಕೂಡಲೇ ಸದರಿಯವರನ್ನು ಸೇವೆಯಿಂದ ಅಮಾನತ್ತುಪಡಿಸಲು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 108 ಇಎನ್‌ಕ್ಯೂ 2015, ಬೆಂಗಳೂರು, ದಿನಾಂಕ 18-01-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕಲಬುರಗಿ ಕರ್ನಾಟಕ ಲೋಕಾಯುಕ್ತ ಪೋಲೀಸ್ ಠಾಣೆಯ ಮೊಕದ್ದಮೆ ಸಂಖ್ಯೆ 12/2015 ಕಲಂ 13(1)(ಇ) ಸಹವಾಚನ 13(2) ಭ್ರಷ್ಟಾಚಾರ ನಿರೋಧ ಕಾಯ್ದೆ 1988ರ ರೀತ್ಯಾ ದಾಖಲಾಗಿರುವ ಮೊಕದ್ದಮೆಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಕೈಗೊಳ್ಳುವ ಕ್ರಮವನ್ನು ಬಾಕಿ ಇರಿಸಿ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 10(1)(ಎಎ) ರನ್ವಯ ಸರ್ಕಾರವು ಶ್ರೀ ಮಹಾದೇವಪ್ಪ ತಂದೆ ಅಂಬಾರಾಯ ಸಿರಗಾಪೂರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಜಿಲ್ಲಾ ಪಂಚಾಯತ್ ಸೇವೆಗೆ ಸೇರಿದ ಅಧಿಕಾರಿ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮಾನ್ವಿ, ರಾಯಚೂರು ಜಿಲ್ಲೆ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಪಡಿಸಿ ಆದೇಶಿಸಿದೆ.

ಅಮಾನತ್ತು ಅವಧಿಯಲ್ಲಿ ಸದರಿಯವರು ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ. ಸಕ್ಷಮ ಪ್ರಾಧಿಕಾರದ ಅನುಮೋದನೆಯಿಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದಲ್ಲ.

---3

89

ಶ್ರೀ ಮಹಾದೇವಪ್ಪ ತಂದೆ ಅಂಬಾರಾಯ ಸಿರಗಾಪೂರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರ ಲೀನ್‌ನನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇಲ್ಲಿಗೆ ವರ್ಗಾಯಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ ಪೋತಲಕಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಅಪರ ಪೋಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ / ರಾಯಚೂರು.
5. ಪೋಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ ಪೋಲೀಸ್‌ಠಾಣೆ, ಕಲಬುರಗಿ.
6. ಸಂಬಂಧಪಟ್ಟ ಅಧಿಕಾರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಮುಖಾಂತರ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
2. ಗ್ರಾ.ಅ.ಪಂ.ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ)/ ಇವರುಗಳ ಆಪ್ತ ಕಾರ್ಯದರ್ಶಿ /ಆಪ್ತ ಸಹಾಯಕರಿಗೆ.
3. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
4. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಹೊರಡಿಸಿದೆ
ದಿನಾಂಕ......19/1
ಗ್ರಾ.ಅ.ಪಂ. ಇಲಾಖೆ